**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.68/2019**

ಪಿ.ಡಬ್ಲ್ಯೂಃ 3

ಸಿ.ಡಬ್ಲ್ಯೂಃ 5

ಸಾಕ್ಷಿದಾರರ ಹೆಸರು : ರಾಮಚಂದ್ರಪ್ಪ

ತಂದೆಯ ಹೆಸರುಃ ಃ ಸಿದ್ದಪ್ಪ

ವಯಸ್ಸು : **50 ವರ್ಷ**

ಉದ್ಯೋಗ : ವ್ಯವಸಾಯ

ವಾಸಸ್ಥಳ : ಕೆಂಚಾಪುರ ಗ್ರಾಮ

**ದಿನಾಂಕ: 02-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಸುಮಾರು 7-8 ವರ್ಷಗಳ ಹಿಂದೆ ಕೆಂಚಾಪುರ ಗೇಟ್ ಹತ್ತಿರ ಅಡಿಕೆ ಕಳ್ಳತನವಾದ ವಿಚಾರವಾಗಿ 2-00 ಗಂಟೆ ಸಮಯದಲ್ಲಿ ಪೊಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುತ್ತದೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-3 ರಛಾಯಚಿತ್ರದಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಎಂ ಒ -1 ನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ** ಶ್ರೀ ಎಎ **ವಕೀಲರಿಂದ.**

ಚಾಸಾ-1 ರವರು ನಮ್ಮ ಊರಿನವರಾಗಿದ್ದು ನಮ್ಮ ಅಕ್ಕಪಕ್ಕದವಾಗಿರುತ್ತಾರೆ. ನಾನು ಅವರು ವಿಶ್ವಾಸದಿಂದ ಇರುತ್ತೇವೆ. ಮಹಜರ್ ಮಾಡುವ ಮುಂಚೆ ಪೊಲೀಸರು ನನಗೆ ನೋಟಿಸನ್ನು ನೀಡಿರುವುದಿಲ್ಲ. ಮಹಜರ್ ನಲ್ಲಿ ಬರೆದಿರುವ ವಿಚಾರ ಸಂಪೂರ್ಣವಾಗಿ ನನಗೆ ಹೇಳಲು ಬರುವುದಿಲ್ಲ. ಮು ಮಾ-1 ರಲ್ಲಿರುವಂತಹ ಟಾರ್ಪಲ್ ಎಲ್ಲಾ ಕಡೆ ಸಿಗುತ್ತದೆ ಎಂದರೆ ಸರಿ. ನ್ಯಾಯಾಲಯದ ಮುಂದಿರುವ ಮುದ್ದೆ ಮಾಲೇ ಮಹಜರ್ ಮಾಡಿದ ದಿನದಂದು ಅಮಾನತ್ತುಪಡಿಸಿಕೊಂಡ ಟಾರ್ಪಲ್ ಎಂದು ಯಾವುದೇ ನಿಖರವಾದ ಗುರುತು ಇರುವುದಿಲ್ಲ. ನಿಪಿ-3

ಛಾಯಚಿತ್ರವನ್ನು ಯಾವ ದಿನಾಂಕದಂದು ತೆಗೆದಿರುತ್ತಾರೆಂದು ನಮೂದು ಇರುವುದಿಲ್ಲ ಎಂದರೆ ಸರಿ. ನಿಮ್ಮ ಸಮಕ್ಷಮ ಯಾವುದೇ ಮಹಜರ್ ಮಾಡಿರುವುದಿಲ್ಲ ನೀವು ಮತ್ತು ಚಾಸಾ-1 ರವರು ಪರಿಚಯಸ್ಥರಾದ ಕಾರಣ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ

**<u>ಮರುವಿಚಾರಣೆಃ</u>** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**